ಅ) ನಾಲಾ ರಿಪೇರಿ, ಸೌಡಿಗಳ ಸಂಬಳ ಇತ್ಯಾದಿಗಳನ್ನು ಲೆಕ್ಕ ಶೀರ್ಷಿಕೆ 2701 ಯೋಜನೇತರ ಅಡಿಯಲ್ಲಿ ಭರಿಸಲಾಗುತ್ತಿದೆ. ಭದ್ರಾ ಯೋಜನೆಗೆ ಈ ಸಾಲಿನಲ್ಲಿ ಮೇಲ್ಕಂಡ ಲೆಕ್ಕ ಶೀರ್ಷಿಕೆಯಲ್ಲಿ ರೂ.463.75 ಲಕ್ಷಗಳಿವೆ. ಈ ಮೊತ್ತವನ್ನು ಹೆಚ್ಚಿಸಬೇಕೆಂದು ಪ್ರಸ್ತಾವನೆ ಸರ್ಕಾರದ ಮುಂದಿದ್ದು ಇದರ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದು.

ಇ) ಮೇಲಿನ 'ಅ' ನಲ್ಲಿ ತಿಳಿಸಿರುವಂತೆ ಈಗಿರುವ ವ್ಯವಸ್ಥೆಯನ್ನು ಸದ್ಯಕ್ಕೆ ಮುಂದುವರೆಸಲಾಗುವುದು.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿವೇಶನ ವಿತರಣೆ.

2361(2844) ಶ್ರೀ ಕರಿಯಣ್ಣ (ಹೊಳೆಹೊನ್ನೂರು) :— ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕಳೆದ 2 ವರ್ಷಗಳಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಸಾರ್ವಜನಿಕರಿಗೆ ಎಷ್ಟು ನಿವೇಶನ ಹಂಚಿಕೆಯಾಗಿದೆ. ಇದರಲ್ಲಿ ಅಧಿಕಾರಿಗಳಿಗೆ ಮತ್ತು ಸಾರ್ವಜನಿಕರಿಗೆ ಎಷ್ಟು ನಿವೇಶನ ಕೊಡಲಾಗಿದೆ.

ಆ) ಇದರಲ್ಲಿ ಶಾಸಕರಿಗೆ ಮಾಜಿ ಶಾಸಕರಿಗೆ ಲೋಕಸಭಾ ರಾಜ್ಯಸಭಾ ಸದಸ್ಯರಿಗೆ ಎಷ್ಟು ನಿವೇಶನಗಳನ್ನು ಕಳೆದ ಎರಡು ವರ್ಷದಿಂದ ಹಂಚಿಕೆಯಾಗಿದೆ.

ಇ) ಯಾವ ಯಾವ ಬಡಾವಣೆಗಳಲ್ಲಿ ಎಷ್ಟು ನಿವೇಶನಗಳನ್ನು ಈ ವರ್ಷ ಕೈಗೆತ್ತಿಕೊಳ್ಳಲಾಗುವುದು. ಅವುಗಳ ಸಂಖ್ಯೆ ಎಷ್ಟು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :—

ಅ) ಕಳೆದ ಎರಡು ವರ್ಷದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು 15,000 ನಿವೇಶನಗಳನ್ನು ಸಾರ್ವಜನಿಕರಿಗೆ ಹಂಚಿಕೆ ಮಾಡಿರುತ್ತದೆ. ಇದರಲ್ಲಿ ರಾಜ್ಯ ಸರ್ಕಾರದ ನೌಕರರು : ಅಧಿಕಾರಿಗಳಿಗೆ ಮತ್ತು ಕೇಂದ್ರ ಸರ್ಕಾರ : ಸ್ವಾಯತ ಸಂಸ್ಥೆಗಳ ನೌಕರರು : ಅಧಿಕಾರಿಗಳಿಗೆ ಒಟ್ಟು 1784 ನಿವೇಶನಗಳನ್ನು ಹಾಗೂ 13,216 ನಿವೇಶನಗಳನ್ನು ಸಾರ್ವಜನಿಕರಿಗೆ ಹಂಚಿಕೆ ಮಾಡಲಾಗಿರುತ್ತದೆ.

ಆ) 14 ಬಿಡಿ ನಿವೇಶನಗಳನ್ನು ಶಾಸಕರಿಗೆ ಹಾಗೂ ಮಾಜಿ ಶಾಸಕರಿಗೆ ಹಂಚಿಕೆ ಮಾಡಲಾಗಿರುತ್ತದೆ.

ಇ) ಈ ಕೆಳಕಂಡ ಬಡಾವಣೆಗಳಲ್ಲಿ ಸುಮಾರು 20,000 ನಿವೇಶನಗಳನ್ನು ರಚಿಸಲು ಕ್ರಮ ಕೈಗೊಳ್ಳಲಾಗುವುದು.

ಅ) ಬನಶಂಕರಿ 6ನೇ ಹಂತ

ಆ) ಅಂಜನಾಪುರ ಮುಂದುವರಿದ ಬಡಾವಣೆ.